ಅ) ಈ ಪ್ರೋತ್ಸಾಹಕ್ಕೆ ಪ್ರೋತ್ಸಾಹಿಯಾಗಿರುವವರ ಮೇಲೆ ಸರ್ಕಾರ ಕಾನೂನು ರೀತ್ಯ ಕ್ರಮ ಕೈಗೊಳ್ಳುವುದೇ?

ಆ) ಇದ್ದಲ್ಲಿ ಅದರ ವಿವರವೇನು?

ಶ್ರೀ ಎಸ್.ಎಂ. ಕೃಷ್ಣ (ಉಪ ಮುಖ್ಯಮಂತ್ರಿಗಳು): ಅ) ಬಿರುಸು ಪಟಾಕಿಗಳನ್ನು ತಯಾರಿಸಿ ಮಾರಾಟ ಮಾಡುವುದಕ್ಕೆ ಯಾವುದೇ ನಿರ್ಬಂಧವಿಲ್ಲ. 1992ರಲ್ಲಿ ಪ್ರಸ್ತಾಪವಿದ್ದ ಪಟಾಕಿಗಳನ್ನು ಮಾತ್ರ ನಿಷೇಧಿಸಲಾಗಿದೆ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಘಟಪ್ರಭಾ ಯೋಜನೆಯ ಧೂಪದಾಳ ಜಲಾಶಯದಲ್ಲಿ ಹೂಳು ತೆಗೆಯುವ ಬಗ್ಗೆ

484 - ಶ್ರೀ ಉಮೇಶ್ ವಿ. ಕತ್ತಿ (ಹುಕ್ಕೇರಿ): ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಘಟಪ್ರಭಾ ಯೋಜನೆಯ ಧೂಪದಾಳ ಜಲಾಶಯದಲ್ಲಿ ತುಂಬಿಕೊಂಡಿರುವ ಹೂಳು ತೆಗೆಯಲು ಸರ್ಕಾರ ಕ್ರಮ ಕೈಗೊಂಡಿದೆಯೇ?

ಆ) ಈ ಹೂಳು ಕೊಡೊಯ್ಯಲು ಅನುಕೂಲವಾಗುವಂತೆ ಜಲಾಶಯದ ಪ್ರದೇಶದಲ್ಲಿ ಒಂದು ಸೇತುವೆ ನಿರ್ಮಿಸಿ ಕೊಡಬೇಕೆಂದು ಆ ಭಾಗದ ರೈತರ ಬಹುದಿನದ ಬೇಡಿಕೆಯನ್ನು ಸರ್ಕಾರ ಈಡೇರಿಸುತ್ತದೆಯೇ?

ಇ) ಆ ಸೇತುವೆಗಾಗಿ ಯೋಜನೆ ರೂಪಿಸಲಾಗಿದೆಯೇ?

ಈ) ಹಾಗಿದ್ದರೆ ಅದರ ವೆಚ್ಚವೆಷ್ಟು?

ಶ್ರೀ ಎಸ್.ಎಂ. ಕೃಷ್ಣ (ಉಪ ಮುಖ್ಯಮಂತ್ರಿಗಳು): ಅ) ಇಲ್ಲ

ಆ) ಪ್ರಶ್ನೆ ಉದ್ಭವಿಸುವುದಿಲ್ಲ

ಇ) ಇಲ್ಲ

ಈ) ಪ್ರಶ್ನೆ ಉದ್ಭವಿಸುವುದಿಲ್ಲ.

ಹುಕ್ಕೇರಿ ತಾಲ್ಲೂಕಿನಲ್ಲಿ ವಿದ್ಯುತ್ ನಿಲುಗಡೆ ಬಗ್ಗೆ

486 - ಶ್ರೀ ಉಮೇಶ್ ವಿ. ಕತ್ತಿ (ಹುಕ್ಕೇರಿ): ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಕ್ಕೇರಿ ತಾಲ್ಲೂಕು ವಿದ್ಯುತ್ ಸರಬರಾ ಸಂಸ್ಥೆಯಿಂದ ವಿದ್ಯುತ್ ನಿಲುಗಡೆ ಬಹಳ ಆಗುತ್ತಿದ್ದು ಇದರಿಂದಾಗಿ ಆ ಭಾಗದ ರೈತರಿಗೆ ತೊಂದರೆ ಆಗುತ್ತಿರುವ ತೊಂದರೆ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಇದನ್ನು ಹೋಗಲಾಡಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು?

ಶ್ರೀ ಎಸ್.ಎಂ. ಕೃಷ್ಣ (ಉಪ ಮುಖ್ಯಮಂತ್ರಿಗಳು):

ಅ) ಹೌದು

ಆ) ಹುಕ್ಕೇರಿ ತಾಲ್ಲೂಕಿನಲ್ಲಿ ವಿದ್ಯುತ್ ಸರಬರಾಜಿನ ಸುಧಾರಣೆಗಾಗಿ ಹಿಡಕಲ್ಲಲ್ಲಿ ಒಂದು 110/11 ಕೆ.ವಿ. ವಿದ್ಯುತ್ ಉಪಕೇಂದ್ರವನ್ನು ಕಣಗಲಾ ಮತ್ತು ಗುಡಾಸ್ ಗ್ರಾಮಗಳಲ್ಲಿ ತಲಾ ಒಂದೊಂದು 33/11 ಕೆ.ವಿ. ವಿದ್ಯುತ್ ಉಪಕೇಂದ್ರಗಳನ್ನು ನಿರ್ಮಾಣ ಮಾಡಲು ಪ್ರಸ್ತಾವನೆಗಳು ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿಯ ಮುಂದಿದೆ.